ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001.
ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ : 10-6-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | "ದೂರ ಸಂವೇದಿ ಭವನ" ದ ಉದ್ಘಾಟನಾ ಸಮಾರಂಭ:<br><br>ಉದ್ಘಾಟನೆ:<br><br>ಸಿದ್ದರಾಮಯ್ಯ, ಮುಖ್ಯಮಂತ್ರಿಗಳು<br><br>ಮುಖ್ಯ ಅತಿಥಿಗಳು:<br><br>ಡಿ.ವಿ. ಸದಾನಂದಗೌಡ, ಕೇಂದ್ರ ಕಾನೂನು ಸಚಿವರು.<br><br>ಎಸ್.ಆರ್. ಪಾಟೀಲ್, ಯೋಜನೆ ಮತ್ತು ಸಾಂಖ್ಯಿಕ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.<br><br>ಸೂಚನೆ: ಈ ಕಾರ್ಯಕ್ರಮಕ್ಕೆ ಮಾಧ್ಯಮದವರನ್ನು ಕರೆದೊಯ್ಯಲು ಅಂದು ಬೆಳಗ್ಗೆ 9-15 ಗಂಟೆಗೆ ಭಗವಾನ್ ಮಹಾವೀರ ರಸ್ತೆಯ ವಾರ್ತಾಸೌಧದಿಂದ ವಾಹನ ವ್ಯವಸ್ಥೆ ಮಾಡಲಾಗಿದೆ. | 11-06-2015<br>ಗುರುವಾರ<br>ಬೆಳಿಗ್ಗೆ<br>10-30 ಗಂಟೆಗೆ | ಮೇಜರ್ ಸಂದೀಪ್ ಉನ್ನಿಕೃಷ್ಣನ್ ರಸ್ತೆ, ದೊಡ್ಡಬೆಟ್ಟಹಳ್ಳಿ, ಉತ್ತರಹಳ್ಳಿ ತಾಲ್ಲೂಕು ಬೆಂಗಳೂರು – 560 097 |

| | | | |
|---|---|---|---|
| 2. | ‘ಆನ್‌ಲೈನ್ ಸರ್ವೀಸಸ್’ ಉದ್ಘಾಟನೆ<br><br>(ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ)<br><br>ಟಿ.ಬಿ. ಜಯಚಂದ್ರ,<br>ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಕರ್ನಾಟಕ ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ಇಲಾಖೆ ಸಚಿವರು<br><br>ಘಾಟಿ ಶ್ರೀ ಸುಬ್ರಹ್ಮಣ್ಯ ದೇವಾಲಯದಲ್ಲಿ ಗಣಕೀಕೃತ ರಶೀದಿ ವಿತರಣೆ ಘಟಕ ಹಾಗೂ ವಸತಿ ಗೃಹ ಉದ್ಘಾಟನೆ:<br><br>ಟಿ.ಬಿ. ಜಯಚಂದ್ರ,<br>ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಕರ್ನಾಟಕ ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ಇಲಾಖೆ ಸಚಿವರು | 11-06-2015<br>ಗುರುವಾರ<br>ಬೆಳಿಗ್ಗೆ<br>11-00 ಗಂಟೆಗೆ<br><br>ಮಧ್ಯಾಹ್ನ<br>1-00<br>ಗಂಟೆಗೆ | ಕೊಠಡಿ ಸಂಖ್ಯೆ 327, 3ನೇ ಮಹಡಿ, ವಿಧಾನಸೌಧ, ಬೆಂಗಳೂರು<br><br>ಘಾಟಿ ಸುಬ್ರಹ್ಮಣ್ಯ ದೇವಾಲಯ,<br>ದೊಡ್ಡಬಳ್ಳಾಪುರ,<br>ಬೆಂಗಳೂರು ಗ್ರಾಮಾಂತರ ಜಿಲ್ಲೆ |
| 3. | ಪತ್ರಿಕಾಗೋಷ್ಠಿ:<br><br>ಬಾಬುರಾವ್ ಚಿಂಚನಸೂರ್,<br>ಜವಳಿ, ಬಂದರು ಮತ್ತು ಒಳನಾಡು ಜಲಸಾರಿಗೆ ಖಾತೆ ಸಚಿವರು | 11-06-2015<br>ಗುರುವಾರ<br>ಅಪರಾಹ್ನ<br>12-00 ಗಂಟೆಗೆ | ಕೊಠಡಿ ಸಂಖ್ಯೆ 339,<br>ಮೂರನೇ ಮಹಡಿ<br>ವಿಧಾನಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಜೂನ್ 10 (ಕರ್ನಾಟಕ ವಾರ್ತೆ)

ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ 2014 ನೇ ಸಾಲಿನ ಯುವಬರಹಗಾರರ ಚೊಚ್ಚಲ ಕೃತಿಗಳನ್ನು ಪ್ರಕಟಿಸಲು ಪ್ರೋತ್ಸಾಹಧನ ನೀಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಜಿದಾರರು ಕನಿಷ್ಟ 18 ರಿಂದ 35 ವರ್ಷ ವಯೋಮಿತಿಯವರಾಗಿರಬೇಕು. ಸ್ವ-ವಿವರವುಳ್ಳ ಮನವಿಯೊಂದಿಗೆ ದೃಢೀಕೃತ ಎಸ್.ಎಸ್.ಎಲ್.ಸಿ. ಪ್ರಮಾಣ ಪತ್ರದ ಪ್ರತಿ ಅಥವಾ ಅಧಿಕೃತವಾದ, ದೃಢೀಕರಿಸಲ್ಪಟ್ಟ ಜನ್ಮ ದಾಖಲಾತಿ ಪ್ರಮಾಣ ಪತ್ರದ ಪ್ರತಿಯನ್ನು ಸಲ್ಲಿಸಬೇಕು. ಅಲ್ಲದೆ ಪ್ರಸ್ತುತ ಸಲ್ಲಿಸಲ್ಪಡುತ್ತಿರುವ ಕೃತಿಯು ತಮ್ಮ ಚೊಚ್ಚಲ ಕೃತಿಯಾಗಿದ್ದು, ಎಲ್ಲಿಯೂ ಪ್ರಕಟವಾಗಿಲ್ಲವೆಂದು ಸ್ವಯಂ ದೃಢೀಕರಣ ಪತ್ರ ನೀಡಬೇಕು.

ಆಯ್ಕೆಗಾಗಿ ಸಲ್ಲಿಸುವ ಹಸ್ತಪ್ರತಿಯು ಡಿ.ಟಿ.ಪಿ. ಮಾಡಿಸಿದಾಗ 1/8 ಡೆಮ್ಮಿ ಆಳತೆಯಲ್ಲಿ ಕನಿಷ್ಟ 60 ಪುಟಗಳಿರಬೇಕು. ಅನುವಾದ, ಪಠ್ಯಪುಸ್ತಕ ಹಾಗೂ ಬೇರಾವುದೇ ಪದವಿಗೆ ಸಿದ್ದಪಡಿಸಿದ ಪ್ರಬಂಧಗಳನ್ನು ಹೊರತುಪಡಿಸಿ, ಕಥೆ, ಕಾದಂಬರಿ, ಕವನ, ನಾಟಕ, ವಿಮರ್ಶಾ ಲೇಖನ, ಪ್ರಬಂಧ ಮುಂತಾದ ಕನ್ನಡ ಸಾಹಿತ್ಯದ ಪ್ರಕಾರಗಳಿಗೆ ಸಂಬಂಧಿಸಿದಂತೆ ಹಸ್ತಪ್ರತಿ ಇರಬೇಕು. ಕೃತಿಯ ಪಠ್ಯದಲ್ಲಿ

ಯಾವುದೇ ಧರ್ಮ, ದೇವರು, ಜಾತಿ ಕೋಮು, ವೃತ್ತಿ, ಸಮುದಾಯ, ಭಾಷೆ ಆಚರಣೆ, ಪದ್ದತಿ, ಇತ್ಯಾದಿ ಸಂಗತಿಗಳಿಗೆ ಸಂಬಂಧಿಸಿದಂತೆ ಹಾಗೂ ರಾಷ್ಟ್ರೀಯ ನಾಯಕರುಗಳ ಕುರಿತಂತೆ ನೇರವಾಗಿಯೇ ಆಗಲಿ ಅಥವಾ ಪರೋಕ್ಷವಾಗಿಯೇ ಆಗಲಿ ಮನನೋಯಿಸುವಂತಹ ವಿಷಯವಾಗಲಿ ಇರಬಾರದು. ಅಲ್ಲದೆ ರಾಷ್ಟ್ರೀಯ ಭಾವೈಕ್ಯತೆಗೆ ದಕ್ಕೆ ತರುವಂತಹ ವಿಷಯ/ಸಂಗತಿಗಳು ಪ್ರಸ್ತಾಪವಾಗಿರಬಾರದು. ಪ್ರಾಧಿಕಾರಕ್ಕೆ ಸಲ್ಲಿಸಲ್ಪಡುವ ಅರ್ಜಿಗಳನ್ನು / ಹಸ್ತಪ್ರತಿಗಳನ್ನು ಹಿಂದಿರುಗಿಸಲಾಗುವುದಿಲ್ಲ. ಆದಕಾರಣ ಹಸ್ತ ಪ್ರತಿಯ/ಡಿಟಿಪಿ ಪ್ರತಿಯ ಎರಡನೇ ಪ್ರತಿಯನ್ನು ಸಲ್ಲಿಸಲು ತಿಳಿಸಿದೆ.

ಅರ್ಜಿಗಳನ್ನು ದಿನಾಂಕ 09-07-2015 ರೊಳಗೆ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 – ಅವರಿಗೆ ಕಳುಹಿಸಿಕೊಡಲು ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – ದೂರವಾಣಿ ಸಂಖ್ಯೆ: 080 – 22484516/22017204 ಇಲ್ಲಿ ಸಂಪರ್ಕಿಸಬಹುದಾಗಿದೆ.

ಬಾಬು:ಜಿಪಿಆರ್/

# ರಿಯಾಯಿತಿ ಪುಸ್ತಕ ಮಾರಾಟ ಮೇಳ

ಬೆಂಗಳೂರು, ಜೂನ್ 10 (ಕರ್ನಾಟಕ ವಾರ್ತೆ)

ಕನ್ನಡ ಪುಸ್ತಕ ಪ್ರಾಧಿಕಾರದಿಂದ ಚಾಮರಾಜನಗರದ ಚಾಮರಾಜೇಂದ್ರ ಸ್ವಾಮಿ ದೇವಸ್ಥಾನದ ಆವರಣದಲ್ಲಿ ದಿನಾಂಕ 26-06-2015 ರಿಂದ 30-06-2015 ರವರೆಗೆ ಒಟ್ಟು ಐದು ದಿನಗಳ ಕಾಲ 'ರಿಯಾಯಿತಿ ಕನ್ನಡ ಪುಸ್ತಕ ಮಾರಾಟ ಮೇಳ – 2015' ನ್ನು ಹಮ್ಮಿಕೊಳ್ಳಲಾಗಿದೆ. ಈ ಪುಸ್ತಕ ಮೇಳದಲ್ಲಿ ಪ್ರಕಾಶನ ಸಂಸ್ಥೆಗಳು/ಪ್ರದರ್ಶಕರು ಭಾಗವಹಿಸಬಹುದಾಗಿದ್ದು, ಮಳಿಗೆಯೊಂದಕ್ಕೆ ರೂ 1,000/- ಗಳ ಬಾಡಿಗೆ ಹಾಗೂ ರೂ 1,000/- ಭದ್ರತಾ ಠೇವಣಿ ಡಿ.ಡಿ. ಯನ್ನು ಪ್ರತ್ಯೇಕ – ಪ್ರತ್ಯೇಕವಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು ಇವರ ಹೆಸರಿನಲ್ಲಿ ಸಲ್ಲಿಸುವುದು. ಮೇಳದಲ್ಲಿ ಭಾಗವಹಿಸಲು ಇಚ್ಚಿಸುವ ಪ್ರಕಾಶಕರು/ಪ್ರದರ್ಶಕರು ನಿಗದಿತ ಅರ್ಜಿ ನಮೂನೆಯನ್ನು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರಿನ ಕಚೇರಿ ಅಥವಾ ಆಯಾ ಜಿಲ್ಲೆಯಲ್ಲಿರುವ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಚೇರಿಗಳಲ್ಲಿ ಅಥವಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಂದರೆ www.kannadapusthakapradhikara.com ನಲ್ಲಿ ಅರ್ಜಿಯನ್ನು ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ.

ಭರ್ತಿಮಾಡಿದ ಅರ್ಜಿಗಳನ್ನು ಡಿ.ಡಿ. ಯೋಂದಿಗೆ ದಿನಾಂಕ 20-06-2015 ರೊಳಗಾಗಿ ಕನ್ನಡ ಪುಸ್ತಕ ಪ್ರಾಧಿಕಾರ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು ಅವರ ಹೆಸರಿಗೆ ಸಲ್ಲಿಸಲು ಕೋರಿದೆ. ಆದ್ಯತೆಯ ಮೇರೆಗೆ ಮಳಿಗೆಗಳನ್ನು ಹಂಚಿಕೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – ದೂರವಾಣಿ ಸಂಖ್ಯೆ: 080 – 22484516/22017704 ಅನ್ನು ಸಂಪರ್ಕಿಸಬಹುದಾಗಿದೆ.

ಬಾಬು:ಜಿಪಿಆರ್/

# ಫಲಿತಾಂಶ ಪ್ರಕಟ

ಬೆಂಗಳೂರು, ಜೂನ್ 10 (ಕರ್ನಾಟಕ ವಾರ್ತೆ)

ಪ್ರಸಕ್ತ ಸಾಲಿನ ಏಪ್ರಿಲ್/ಮೇ ತಿಂಗಳಲ್ಲಿ ನಡೆದ ತಾಂತ್ರಿಕ ಪರೀಕ್ಷಾ ಮಂಡಳಿಯ ವಿವಿಧ ಡಿಪ್ಲೆಮಾ ಪರೀಕ್ಷೆಗಳಿಗೆ ಹಾಜರಾಗಿದ್ದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ DCET 2015 ಪರೀಕ್ಷೆ ತೆಗೆದುಕೊಳ್ಳಬಹುದಾದ ಸಂಭವನೀಯ ವಿದ್ಯಾರ್ಥಿಗಳ ಮತ್ತು 2ನೇ ಬಿ.ಕಾಂ.,/ಬಿ.ಬಿ.ಎಂ./ಬಿಎಸ್‌ಸಿ ಫ್ಯಾನ್ ಟೆಕ್ನಾಲಜಿ ಹಾಗೂ ಇನ್ನಿತರೆ ಕೋರ್ಸ್‌ಗಳ ಉನ್ನತ ವ್ಯಾಸಂಗಕ್ಕಾಗಿ ಪ್ರವೇಶ ಪಡೆಯಲು ಅರ್ಹತೆ ಹೊಂದುವ ಸಂಭಾವ್ಯ ವಿದ್ಯಾರ್ಥಿಗಳ ಫಲಿತಾಂಶಗಳನ್ನು ದಿನಾಂಕ 11-06-2015 ರಂದು ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳಲ್ಲಿ ಅಪರಾಹ್ನ 4.00 ಗಂಟೆಗೆ ಸಂಸ್ಥೆಯಲ್ಲಿ ಉಪಯೋಗಿಸುತ್ತಿರುವ BTEL.inx ಆನ್‌ಲೈನ್ ಆಪ್ಲಿಕೇಷನ್ ಮೂಲಕ ಪ್ರಕಟಿಸಲಾಗುವುದು.

ಬಾಬು:ಜಿಪಿಆರ್.